# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1641 |
| ಸದಸ್ಯರ ಹೆಸರು | : | ಡಾ॥ ತಳವಾರ ಸಾಬಣ್ಣ |
| ಉತ್ತರಿಸಬೇಕಾದ ದಿನಾಂಕ | : | 11.03.2022 |
| ಸಚಿವರ ಹೆಸರು ಮತ್ತು ಪದನಾಮ | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ: 29.01.2022 ರಂದು ಹೊರಡಿಸಿದ ಸುತ್ತೋಲೆಯ ಪ್ರಕಾರ ಉತ್ತರ ಕರ್ನಾಟಕದ ತಹಶೀಲ್ದಾರ್‌ರು ತಳವಾರು ಸಮುದಾಯಕ್ಕೆ ಪರಿಶಿಷ್ಟ ಪಂಗಡ (ಎಸ್.ಟಿ) ಜಾತಿ ಪ್ರಮಾಣ ಪತ್ರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ |
| ಆ) | ಹಿಂದುಳಿದ ವರ್ಗಗಳ ಇಲಾಖೆಯಡಿಯಲ್ಲಿ ಬರುವ ಪ್ರವರ್ಗ–1 (Category-1) ಪಟ್ಟಿಯಿಂದ ತಳವಾರ ಜಾತಿಯನ್ನು ತೆಗೆಯಲು ಆಗಿರುವ ವಿಳಂಬಕ್ಕೆ ಕಾರಣಗಳೇನು; ತಳವಾರ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 ಎರಡು ಪಟ್ಟಿಯಲ್ಲಿರುವುದರಿಂದ ಅಧಿಕಾರಿಗಳು ಗೊಂದಲ ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಭಾರತ ಸರ್ಕಾರವು ದಿನಾಂಕ:19.03.2020 ರ ಅಧಿಸೂಚನೆಯಲ್ಲಿ ಕ್ರಮ ಸಂಖ್ಯೆ 38 ರಲ್ಲಿನ Naikda, Nayaka, ಜಾತಿಯ ಪರ್ಯಾಯ ಸಮುದಾಯಗಳೆಂದು ಪರಿವಾರ ಮತ್ತು ತಳವಾರ ಜಾತಿಗಳನ್ನು ರಾಜ್ಯ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆಗೊಳಿಸಿ ಆದೇಶಿಸಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 23 ಎಸ್‌ಎಡಿ 2009, ದಿನಾಂಕ: 31.08.2020 ರಲ್ಲಿ ನೈಜವಾದ ಪರಿಶಿಷ್ಟ ಪಂಗಡದ ಜಾತಿಗೆ ಸೇರಿದ ಪರಿವಾರ ಮತ್ತು ತಳವಾರ ಜಾತಿ ವ್ಯಕ್ತಿಗಳಿಗೆ ಯಾವುದೇ ತೊಂದರೆಯಾಗದಂತೆ ಹಾಗೂ ನಿಗಧಿತ ಅವಧಿಯೊಳಗೆ ಜಾತಿ ಪ್ರಮಾಣ ಪತ್ರ ನೀಡುವಂತೆ ಸಂಬಂಧಿಸಿದ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ. |
| ಇ) | ಸರ್ಕಾರದ ಭರವಸೆಯಂತೆ ತಳವಾರ ಸಮುದಾಯದವರಿಗೆ ಪರಿಶಿಷ್ಟ ಪಂಗಡ ಪ್ರಮಾಣ ಪತ್ರ ನೀಡಿಕೆಗಾಗಿ ಉತ್ತರ ಕರ್ನಾಟಕದ ಜನರು ಇನ್ನೂ ಎಷ್ಟು ದಿವಸಗಳು ಕಾಯಬೇಕಾಗಿದೆ; | |

| | | |
|---|---|---|
| ಈ) | ದೀರ್ಘಕಾಲೀನ ಜನರ ಹೋರಾಟಕ್ಕೆ ಸರ್ಕಾರ ಕೂಡಲೇ ಪರಿಹಾರ ಕ್ರಮ ಕೈಗೊಳ್ಳುವುದೇ? | ಅದರಂತೆ ದಿನಾಂಕ:28.05.2020 ರಂದು ರಾಜ್ಯ ಸರ್ಕಾರವು ಅಧಿಸೂಚನೆಯನ್ನು ಹೊರಡಿಸಿದೆ. ಈ ಬಗ್ಗೆ ದಿನಾಂಕ:29.01.2022 ರಂದು ಸಹ ಸುತ್ತೋಲೆಯನ್ನು ಹೊರಡಿಸಿ ಕೇಂದ್ರ ಸರ್ಕಾರದ ಅಧಿಸೂಚನೆ ಹಾಗೂ ರಾಜ್ಯ ಸರ್ಕಾರದ ದಿನಾಂಕ:28.05.2020 ರ ಅಧಿಸೂಚನೆ ಅನ್ವಯ ಜಾತಿ ಪ್ರಮಾಣ ಪತ್ರ ವಿತರಣಾ ಪ್ರಾಧಿಕಾರಗಳು ಕ್ರಮವಹಿಸುವಂತೆ ಸೂಚಿಲಾಗಿದೆ.<br><br>Naikda, Nayaka, ಜಾತಿಯ ಪರ್ಯಾಯ ಸಮುದಾಯಗಳೆಂದು ಪರಿಗಣಿಸಿರುವ ಪರಿವಾರ ಮತ್ತು ತಳವಾರ ಜಾತಿಗೆ ಸೇರಿದವರು ಕೇಂದ್ರ ಸರ್ಕಾರದ ಅದೇಶದಂತೆ ಹಾಗೂ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ, 1990 ನಿಯಮಗಳು 1992ರ ಪ್ರಕಾರ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರವನ್ನು ವಿತರಿಸುವಂತೆ ಕೋರಿ ಅರ್ಜಿಯನ್ನು ಸಮುಚಿತ ಮಾರ್ಗದಲ್ಲಿ ತಹಶೀಲ್ದಾರರಿಗೆ ಸಲ್ಲಿಸಬೇಕಾಗಿರುತ್ತದೆ. ಸಂಬಂಧಪಟ್ಟ ತಹಶೀಲ್ದಾರರು ಸದರಿ ಅರ್ಜಿಗಳನ್ನು ಪರಿಶೀಲಿಸಿ ಅರ್ಹರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರವನ್ನು ನೀಡಲು ಮೇಲ್ಕಂಡ ಕಾಯ್ದೆಯ ಪ್ರಕಾರ ಕ್ರಮವಹಿಸುತ್ತಾರೆ.<br><br>ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಯಾಗಿರುವ ಪರಿವಾರ ಮತ್ತು ತಳವಾರ ಜಾತಿಗಳನ್ನು ಹಿಂದುಳಿದ ವರ್ಗಗಳ ಪಟ್ಟಿಯಿಂದ ಕೈಬಿಡುವ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಈಗಾಗಲೇ ಅಭಿಪ್ರಾಯ ನೀಡಲಾಗಿದೆ. |

ಸಕಇ 52 ಎಸ್‌ಎಡಿ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ
ಸಚಿವರು.